ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

**ಸಂಖ್ಯೆ : ವಾಇ : ಉ ನಿ : ಸುಮಪ : 2018–19 :** **ದಿನಾಂಕ : 25–07–2018**

## ಪತ್ರಿಕಾ ಆಮಂತ್ರಣ

1. ಕಾರ್ಗಿಲ್ ವಿಜಯ ದಿವಸದ ಆಚರಣೆ – 2018:

**ಮುಖ್ಯ ಅತಿಥಿ:**

ಹೆಚ್. ಡಿ. ಕುಮಾರಸ್ವಾಮಿ,
ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ.

ಗೌರವ ಅತಿಥಿ:

ಡಾ. ಜಿ. ಪರಮೇಶ್ವರ್, ಉಪ ಮುಖ್ಯಮಂತ್ರಿ, ಕರ್ನಾಟಕ ಸರ್ಕಾರ.

ದಿನಾಂಕ: 26–07–2018, ಗುರುವಾರ, ಬೆಳಿಗ್ಗೆ 8–45 ಗಂಟೆಗೆ.

ಸ್ಥಳ: ಶ್ರೀಮತಿ ಇಂದಿರಾಗಾಂಧಿ ಸಂಗೀತ ಕಾರಂಜಿ ಉದ್ಯಾನವನ ಹತ್ತಿರ, ಚೌಡಯ್ಯ ರಸ್ತೆ, ನೆಹರು ತಾರಾಲಯದ ಎದುರು, ರಾಜ ಭವನದ ಹತ್ತಿರ, ಬೆಂಗಳೂರು – 560 001.

2. ಕರ್ನಾಟಕ ಕೃಷಿ ಬೆಲೆ ಆಯೋಗದ
‘ಕರ್ನಾಟಕದಲ್ಲಿ ರೈತರ ಉತ್ಪನ್ನಗಳಿಗೆ ಲಾಭದಾಯಕ ಬೆಲೆ ಮತ್ತು ಖರೀದಿ ವ್ಯವಸ್ಥೆ ಸದೃಢಗೊಳಿಸುವ’ ಕುರಿತಂತೆ ಒಂದು ದಿನದ ರಾಷ್ಟ್ರ ಮಟ್ಟದ ಕಾರ್ಯಾಗಾರ.

ಉದ್ಘಾಟನೆ:

ಡಾ. ಅಶೋಕ್ ದಳವಾಯಿ,
ಕಾರ್ಯನಿರ್ವಹಣಾಧಿಕಾರಿಗಳು, ರಾಷ್ಟ್ರೀಯ ಮಳೆ ಆಶ್ರಿತ ಕೃಷಿ ಪ್ರಾಧಿಕಾರ (ಎನ್ಆರ್ಎಎ) ನವದೆಹಲಿ.

ಅಧ್ಯಕ್ಷತೆ:

ಎನ್.ಹೆಚ್. ಶಿವಶಂಕರ ರೆಡ್ಡಿ, ಕೃಷಿ ಸಚಿವರು,
ದಿನಾಂಕ: 26–07–2018, ಗುರುವಾರ, ಸಮಯ: ಬೆಳಿಗ್ಗೆ 10.00 ಗಂಟೆಗೆ.

ಸ್ಥಳ: ಪಶು ವೈದ್ಯಕೀಯ ಕಾಲೇಜು ಆವರಣ, ಯು.ಎ.ಎಸ್ ಅಲ್ಯೂಮ್ನಿ ಅಸೋಸಿಯೇಶನ್ ಸಭಾಂಗಣ, ಹೆಬ್ಬಾಳ, ಬೆಂಗಳೂರು.

3. ಕರ್ನಾಟಕ ಲಲಿತಕಲಾ ಅಕಾಡೆಮಿ
"23ನೇ ತಿಂಗಳ ಚಿತ್ರ" ಕಾರ್ಯಕ್ರಮ:

ಉದ್ಘಾಟನೆ:

ಶ್ರೀಮತಿ ಎಸ್. ಧನಲಕ್ಷ್ಮೀ,
ಹಿರಿಯ ಕಲಾವಿದರು, ಬೆಂಗಳೂರು.

ದಿನಾಂಕ: 26-07-2018, ಗುರುವಾರ, ಬೆಳಿಗ್ಗೆ 11-00 ಗಂಟೆಗೆ.

ಸ್ಥಳ: ವರ್ಣ ಆರ್ಟ್ ಗ್ಯಾಲರಿ, 2ನೇ ಮಹಡಿ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು - 560 002.

**ಪತ್ರಿಕಾ ಪ್ರಕಟಣೆ**

**ಸಂಖ್ಯೆ 726/826**

# ಜುಲೈ 27 ರಂದು
# ಶಿವಶರಣ ಶ್ರೀ ಹಡಪದ ಅಪ್ಪಣ್ಣ ಜಯಂತಿ

ಬೆಂಗಳೂರು, ಜುಲೈ 25 (ಕರ್ನಾಟಕ ವಾರ್ತೆ)

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಜುಲೈ 27 ರಂದು ನಗರದ ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ಶಿವಶರಣ ಶ್ರೀ ಹಡಪದ ಅಪ್ಪಣ್ಣ ಜಯಂತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಬೆಳಿಗ್ಗೆ 11.30 ಗಂಟೆಗೆ ಕಾರ್ಯಕ್ರಮ ಪ್ರಾರಂಭವಾಗಲಿದ್ದು, ಶ್ರೀ ಅನ್ನದಾನಿ ಭಾರತಿ ಅಪ್ಪಣ್ಣ ಮಹಾಸ್ವಾಮಿಗಳು, ಶ್ರೀ ಅಪ್ಪಣ್ಣ ದೇವರ ಮಹಾಸಂಸ್ಥಾನ ಮಠ , ತಂಗಡಗಿ ಹಾಗೂ ಶ್ರೀ ಶ್ರೀಧರಾನಂದ ಸರಸ್ವತಿ ಸ್ವಾಮಿಗಳು, ಸವಿತಾ ಪೀಠ ಕುಂಚೂರು, ವಾಡಿ ಇವರುಗಳು ದಿವ್ಯ ಸಾನಿಧ್ಯದಲ್ಲಿ ನಡೆಯಲಿದೆ.

ಈ ಕಾರ್ಯಕ್ರಮದ ಉದ್ಘಾಟನೆಯನ್ನು ರಾಜ್ಯದ ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಅವರು ನೆರವೇರಿಸಲಿದ್ದಾರೆ.

ಕೇಂದ್ರ ರಾಸಾಯನಿಕ ಮತ್ತು ರಸಗೊಬ್ಬರ ಹಾಗೂ ಸಂಸದೀಯ ವ್ಯವಹಾರಗಳ ಖಾತೆ ಸಚಿವ ಅನಂತಕುಮಾರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಡಾ. ಜಯಮಾಲ ರಾಮಚಂದ್ರ ಹಾಗೂ ಬೃಹತ್ ಬೆಂಗಳೂರು ಮಹಾನಗರಪಾಲಿಕೆ, ಬೆಂಗಳೂರಿನ ಮಹಾಪೌರರಾದ ಆರ್. ಸಂಪತರಾಜ್ ಕುಮಾರ್ ಅವರು ಮುಖ್ಯ ಅತಿಥಿಗಳಾಗಿರುವ ಸಮಾರಂಭದಲ್ಲಿ ಮಾಜಿ ಸಚಿವರು ಸೇರಿದಂತೆ ಅನೇಕ ಗಣ್ಯರು ಪಾಲ್ಗೊಳ್ಳಲಿದ್ದಾರೆ.

ಸಮಾರಂಭದ ಅಧ್ಯಕ್ಷತೆಯನ್ನು ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಶಾಸಕ ಡಾ. ಉದಯ್ ಬಿ ಗರುಡಾಚಾರ್ ಅವರು ವಹಿಸಲಿದ್ದಾರೆ.

ಅಂದು ಬೆಳಿಗ್ಗೆ 10.30 ಗಂಟೆಗೆ ಬೆಂಗಳೂರು ಪುರಭವನದಿಂದ ರವೀಂದ್ರ ಕಲಾಕ್ಷೇತ್ರದವರೆಗೆ ಮಂಡ್ಯ ಜಿಲ್ಲೆಯ ಶ್ರೀ ರವಿ ಕೆ.ಎಸ್. ಮತ್ತು ತಂಡದವರಿಂದ ಡೊಳ್ಳು ಕುಣಿತ, ಮೈಸೂರು ಜಿಲ್ಲೆ ಶ್ರೀ ಎಚ್.ವಿ. ಮಹಾದೇವ ಮತ್ತು ತಂಡದವರಿಗೆ ಪೂಜಾ ಕುಣಿತ, ಕೋಲಾರ ಜಿಲ್ಲೆಯ ಶ್ರೀ ಮಂಜುನಾಥ ಮತ್ತು ತಂಡದವರಿಂದ ತಮಟೆ ವಾದನ, ಬೆಂಗಳೂರಿನ ಶ್ರೀಮತಿ ಶಾಲಿನಿ ಮತ್ತು ತಂಡದವರಿಂದ ಪಟ ಕುಣಿತ ಹಾಗೂ ತುಮಕೂರು ಜಿಲ್ಲೆಯ ಶ್ರೀ ಪಾಲಾಕ್ಷಪ್ಪ ಮತ್ತು ತಂಡದವರಿಂದ ಗಾರುಡಿ ಗೊಂಬೆ ಜಾನಪದ ವೈವಿಧ್ಯಮಯ ಕಲಾತಂಡಗಳ ಮೆರವಣಿಗೆ ಕಾರ್ಯಕ್ರಮ ನಡೆಯಲಿದೆ.

ದಾವಣಗೆರೆಯ ಶ್ರೀ ಶರಣ ಶಶಿಧರ ಮತ್ತು ತಂಡದವರಿಂದ ವಚನ ಗಾಯನ ಕಾರ್ಯಕ್ರಮ ಸಹ ಹಮ್ಮಿಕೊಳ್ಳಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

**ಸಂಖ್ಯೆ 727/827**

# ಯುವ ಕಲಾವಿದರ ಕೃತಿಗಳ ಪ್ರದರ್ಶನ

ಬೆಂಗಳೂರು, ಜುಲೈ 25 (ಕರ್ನಾಟಕ ವಾರ್ತೆ)

ಕರ್ನಾಟಕ ಲಲಿತಕಲಾ ಅಕಾಡೆಮಿ ವತಿಯಿಂದ ಜುಲೈ 26 ರಂದು '23ನೇ ತಿಂಗಳ ಚಿತ್ರ' ಯುವ ಕಲಾವಿದರ ಕೃತಿಗಳ ಪ್ರತಿ ತಿಂಗಳ ಪ್ರದರ್ಶನವನ್ನು ಹಮ್ಮಿಕೊಳ್ಳಲಾಗಿದೆ.

ನಗರದ ಜೆ.ಸಿ. ರಸ್ತೆಯ ಕನ್ನಡ ಭವನದ ಎರಡನೇ ಮಹಡಿಯಲ್ಲಿರುವ ವರ್ಣ ಆರ್ಟ್ ಗ್ಯಾಲರಿಯಲ್ಲಿ ಬೆಳಿಗ್ಗೆ 11.00 ಗಂಟೆಗೆ ಹಮ್ಮಿಕೊಂಡಿರುವ ಕಾರ್ಯಕ್ರಮದಲ್ಲಿ ಈ ಪ್ರದರ್ಶನದ ಉದ್ಘಾಟನೆಯನ್ನು ಬೆಂಗಳೂರಿನ ಹಿರಿಯ ಕಲಾವಿದೆ ಶ್ರೀಮತಿ ಎಸ್. ಧನಲಕ್ಷ್ಮೀ ಅವರು ನೆರವೇರಿಸಲಿದ್ದಾರೆ.

ಯುವ ಕಲಾವಿದರಾದ ಕಲಬುರಗಿಯ ಶರಣಬಸಪ್ಪ ಪೂಜಾರಿ, ರಾಯಚೂರು ಜಿಲ್ಲೆಯ ಶರಣಬಸವ ಎಂ, ತುಮಕೂರು ಜಿಲ್ಲೆಯ ದಯಾನಂದ ಹಾಗೂ ಬಾಗಲಕೋಟೆ ಜಿಲ್ಲೆಯ ಚಂದ್ರಶೇಖರ ಎಂ. ಚಲವಾದಿ ಅವರುಗಳು ಕೃತಿ ಪ್ರದರ್ಶನವನ್ನು ಹಮ್ಮಿಕೊಳ್ಳಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

**ಸಂಖ್ಯೆ 728/828**

## ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿಗಳಿಗೆ ಮತ್ತು ಸಂಸ್ಥೆಗಳಿಗೆ ರಾಜ್ಯ ಪ್ರಶಸ್ತಿ ನೀಡಲು ಅರ್ಜಿ ಆಹ್ವಾನ

ಬೆಂಗಳೂರು, ಜುಲೈ 25 (ಕರ್ನಾಟಕ ವಾರ್ತೆ)

ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿಗಳಿಗೆ ಮತ್ತು ಸಂಸ್ಥೆಗಳಿಗೆ ರಾಜ್ಯ ಪ್ರಶಸ್ತಿ ನೀಡಲು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅರ್ಜಿ ಆಹ್ವಾನಿಸಲಾಗಿದೆ.

ಕರ್ನಾಟಕ ಸರ್ಕಾರವು ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಕನಿಷ್ಠ 5 ವರ್ಷಗಳ ಕಾಲ ಅತ್ಯುತ್ತಮ ಸೇವೆ ಸಲ್ಲಿಸಿರುವಂತಹ ವ್ಯಕ್ತಿಗಳಿಗೆ ತಲಾ ರೂ.25,000/–ಗಳ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ಹಾಗೂ ಸಂಸ್ಥೆಗಳಿಗೆ ತಲಾ ರೂ.1,00,000/– ನಗದು ಬಹುಮಾನ ಹಾಗೂ ಪ್ರಶಸ್ತಿ ಪತ್ರವನ್ನು ಮಕ್ಕಳ ದಿನಾಚರಣೆಯಂದು ಪ್ರದಾನ ಮಾಡಿ ಗೌರವಿಸುತ್ತದೆ.

2018ನೇ ಸಾಲಿನ ಪ್ರಶಸ್ತಿಗಾಗಿ ನಿಗದಿಪಡಿಸಿರುವ ಅರ್ಜಿ ನಮೂನೆಗಳನ್ನು ಸಂಬಂಧಿಸಿದ ಜಿಲ್ಲೆಯ ಉಪ ನಿರ್ದೇಶಕರು, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಇವರಿಂದ ಪಡೆದು ಭರ್ತಿ ಮಾಡಿದ ಅರ್ಜಿಗಳನ್ನು ದ್ವಿಪ್ರತಿಯಲ್ಲಿ ಸಂಬಂಧಪಟ್ಟ ಜಿಲ್ಲೆಯ ಉಪ ನಿರ್ದೇಶಕರು, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರಿಗೆ ದಿನಾಂಕ:20.08.2018ರೊಳಗೆ ಸಲ್ಲಿಸತಕ್ಕದ್ದು. ನಿಗದಿತ ದಿನಾಂಕದ ನಂತರ ಸಲ್ಲಿಸಿದ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ. ಅರ್ಜಿಗಳನ್ನು ಕನ್ನಡ ಭಾಷೆಯಲ್ಲಿಯೇ ಸಲ್ಲಿಸತಕ್ಕದ್ದು ಎಂದು ಪ್ರಕಟಣೆ ತಿಳಿಸಿದೆ.

**ಸಂಖ್ಯೆ 729/829**

## APPLICATIONS INVITED FOR STATE AWARD FOR INDIVIDUALS AND INSTITUTIONS IN THE FIELD OF CHILD WELFARE

Bengaluru, July 25, (Karnataka Information)

Government of Karnataka confers award to Individuals and Institutions who have worked for the welfare of children for more than 5 years. Individual award carries cash prize of Rs. 25,000/- and a citation and Institutional award carries cash prize of Rs.1,00,000/- and a citation.

The prescribed forms for the year 2018 may be obtained from the Deputy Director of Women & Child Development Department in the respective Districts. The filled applications should be submitted to the concerned District

Deputy Director of Women & Child Development Department on or before 20.08.2018. The applications received after due date will not be considered. The applications should be submitted in Kannada only.

**ಸಂಖ್ಯೆ 730/830**

## ಅಧ್ಯಕ್ಷರಾಗಿ ಅಧಿಕಾರ ಸ್ವೀಕಾರ

ಬೆಂಗಳೂರು, ಜುಲೈ 25 (ಕರ್ನಾಟಕ ವಾರ್ತೆ)

ಸಮಾಜ ಕಲ್ಯಾಣ ಸಚಿವ ಪ್ರಿಯಾಂಕ್ ಖರ್ಗೆ ಅವರು ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗದ ಅಧ್ಯಕ್ಷರಾಗಿ ಜುಲೈ 20 ರಂದು ಪೂರ್ವಾಹ್ನ ಅಧಿಕಾರವನ್ನು ವಹಿಸಿಕೊಂಡಿರುತ್ತಾರೆ.

ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗದ ಕುರಿತು ತಮ್ಮ ವೈಯಕ್ತಿಕ ಗಮನ ಸೆಳೆಯುವ ಪತ್ರಗಳು/ಅರೆಸರ್ಕಾರಿ ಪತ್ರಗಳನ್ನು ಪ್ರಿಯಾಂಕ್ ಖರ್ಗೆ, ಸಮಾಜ ಕಲ್ಯಾಣ ಸಚಿವರು ಹಾಗೂ ಅಧ್ಯಕ್ಷರು, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ, ನಂ 1/14, ದಕ್ಷಿಣ ವಿಂಗ್ ನೆಲಮಹಡಿ, ಸಿಲ್ವರ್ ಜೂಬ್ಲಿ ಬ್ಲಾಕ್ ಪಾರ್ಟ್ ಆಫ್ ಯೂನಿಟಿ ಬಿಲ್ಡಿಂಗ್, ಮಿಷನ್ ರೋಡ್, ಬೆಂಗಳೂರು ಈ ವಿಳಾಸಕ್ಕೆ ಕಳುಹಿಸಿಕೊಡಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಸಂಖ್ಯೆ 731/831**

## ಎಸಿಬಿ ದಾಳಿ

ಬೆಂಗಳೂರು, ಜುಲೈ 25 (ಕರ್ನಾಟಕ ವಾರ್ತೆ)

**ಇಂದು ಭ್ರಷ್ಟಾಚಾರ ನಿಗ್ರಹ ದಳವು ಶ್ರೀ.ಯಶವಂತ್, ಕಿರಿಯ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ–ವಿಭಾಗ, ಸೊರಬ, ಶಿವಮೊಗ್ಗ ಜಿಲ್ಲೆ ಎಂಬುವವರು ತಮ್ಮ ಬಲ್ಲ ಮೂಲಗಳಿಂದ ಅಸಮತೋಲನ ಆಸ್ತಿ ಪಾಸ್ತಿಗಳನ್ನು ಹೊಂದಿರುವ ಬಗ್ಗೆ ವಿಶ್ವಾಸಾರ್ಹ ಮಾಹಿತಿ ಸಂಗ್ರಹಿಸಿ ಅಕ್ರಮ ಆಸ್ತಿಗಳಿಕೆ ಪ್ರಕರಣವನ್ನು ದಾಖಲಿಸಿ ಅವರು ವಾಸವಿರುವ 1) ಸಾಗರ ನಗರದ ಅಣಲೆಕೊಪ್ಪ ಬಡಾವಣೆಯ ಮನೆ 2) ಶಿವಮೊಗ್ಗ, ಕಲ್ಲಹಳ್ಳಿ ನಿವಾಸ 3) ಸೊರಬ ತಾಲ್ಲೂಕು, ಚಂದ್ರಗುತ್ತಿ ಹೋಬಳಿ, ಮಂಗಳೂರು ಗ್ರಾಮದ ತೋಟದ ಮನೆ 4) ಅವರು ಕರ್ತವ್ಯ ನಿರ್ವಹಿಸುತ್ತಿರುವ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ–ವಿಭಾಗ, ಸೊರಬ ಕಛೇರಿ ಮೇಲೆ ದಾಳಿ ನಡೆಸಲಾಗಿರುತ್ತದೆ.**

ಎಸಿಬಿ ಚಿತ್ರದುರ್ಗ ಠಾಣೆ ತಂಡಗಳಿಂದ ಮೇಲ್ಕಂಡ ಆರೋಪಿತ ಸರ್ಕಾರಿ ನೌಕರರ ವಿರುದ್ದ ದಾಳಿ ಮುಂದುವರೆದಿದ್ದು, ಸದರಿ ಸರ್ಕಾರಿ ನೌಕರರು ಹೊಂದಿರುವ ಆಸ್ತಿ–ಪಾಸ್ತಿಗಳ ಮೂಲದ ಬಗ್ಗೆ ತನಿಖೆ ಮುಂದುವರೆದಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

ಸಂಖ್ಯೆ 732/832

## ACB Raid

**Bengaluru, July 25(Karnataka Information)**

Today ACB has conducted raids over the properties of Shri.S.Yashavanth, Junior Engineer, Panchayat Raj & Engineering Sub division, Soraba, Shivamogga district who is belived to have amassed disproportionate assets beyond his known sources of income.

Raids were conducted at four places connected to this official 1) his place of residence at Analakoppa, Sagara Town 2) Kallahalli residence, Shivamogga 3) Farm house in Chandragutti Hobli, Mangalore village, Soraba Taluk, Shivamogga district 4) Panchayat Raj & Engineering Sub division Office, Soraba are being searched.

A Case against the official mentioned above is registered at Shivamogga ACB police station. Search and verification of properties by the ACB teams is continued to find out the source of income and other possible places for the search says official press release.

ಸಂಖ್ಯೆ 733/833

## ಎಸಿಬಿ ದಾಳಿ

ಬೆಂಗಳೂರು, ಜುಲೈ 25 (ಕರ್ನಾಟಕ ವಾರ್ತೆ)

ಪಿರ್ಯಾದುದಾರರು ಬಿ.ಎಂ.ಟಿ.ಸಿ ಯಲ್ಲಿ ಬಸ್ ನಿರ್ವಾಹಕರಾಗಿ (Bus Conductor) ಕೆಲಸ ಮಾಡಿಕೊಂಡಿದ್ದು, ತನ್ನ ಅಕ್ಕ ವರಲಕ್ಷ್ಮಮ್ಮ ಎಂಬುವವರಿಗೆ ಕಿಡ್ನಿ ದಾನ ಮಾಡಿರುತ್ತಾರೆ. ಸದರಿಯವರು ಬಸ್ ನಿರ್ವಾಹಕರಾಗಿ ಕೆಲಸ ಮಾಡಲು ಸಾಧ್ಯವಾಗದ ಕಾರಣ ವೈದ್ಯಕೀಯ ಪ್ರಮಾಣ ಪತ್ರಕ್ಕಾಗಿ (Medical

Certificate) ಅರ್ಜಿಯನ್ನು ಸಲ್ಲಿಸಿರುತ್ತಾರೆ. ವೈದ್ಯಕೀಯ ಪ್ರಮಾಣ ಪತ್ರವನ್ನು ನೀಡಲು ವೈದ್ಯಕೀಯ ಮಂಡಳಿಗೆ (Medical Board) ಕಡತವನ್ನು ಮಂಡಿಸಲು ಗುತ್ತಿಗೆ ನೌಕರರಾದ ಶ್ರೀ.ಜಗದೀಶ್, ಡಾಟಾ ಎಂಟ್ರಿ ಆಪರೇಟರ್, ಎಸ್.ಎನ್.ಆರ್ ಸರ್ಕಾರಿ ಆಸ್ಪತ್ರೆ, ಕೋಲಾರ ರವರು ಅರ್ಜಿದಾರರಿಂದ ₹ **15,000/–** ಲಂಚಕ್ಕಾಗಿ ಬೇಡಿಕೆ ಇಟ್ಟಿರುವ ಬಗ್ಗೆ ಕೋಲಾರ ಜಿಲ್ಲಾ ಭ್ರಷ್ಟಾಚಾರ ನಿಗ್ರಹ ದಳ ಠಾಣೆಯಲ್ಲಿ ಪ್ರಕರಣ ದಾಖಲಾಗಿರುತ್ತದೆ.

ದಿನಾಂಕ **25–07–2018** ರಂದು ಶ್ರೀ.ಜಗದೀಶ್, ಡಾಟಾ ಎಂಟ್ರಿ ಆಪರೇಟರ್, (ಗುತ್ತಿಗೆ ನೌಕರ) ಎಸ್.ಎನ್.ಆರ್ ಸರ್ಕಾರಿ ಆಸ್ಪತ್ರೆ, ಕೋಲಾರ ರವರು ಪಿರ್ಯಾದುದಾರರಿಂದ ₹ **12,000/–** ಲಂಚದ ಹಣ ಸ್ವೀಕರಿಸುತ್ತಿದ್ದ ಸಂದರ್ಭದಲ್ಲಿ ಕೋಲಾರ ಭ್ರಷ್ಟಾಚಾರ ನಿಗ್ರಹ ದಳದ ಅಧಿಕಾರಿಗಳು ನಡೆಸಿದ ಕಾರ್ಯಾಚರಣೆಯಲ್ಲಿ ಸಿಕ್ಕಿ ಬಿದ್ದಿರುತ್ತಾರೆ. ಇವರನ್ನು ದಸ್ತಗಿರಿ ಮಾಡಿ ಲಂಚದ ಹಣವನ್ನು ವಶಪಡಿಸಿಕೊಳ್ಳಲಾಗಿದೆ. ತನಿಖೆ ಮುಂದುವರೆದಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

**ಸಂಖ್ಯೆ 734/834**

# ACB Raid

**Bengaluru, July 25(Karnataka Information**

Complainant working as BMTC Conductor had donated kidney to her sister Varalakshmamma. After this she was unable to work as conductor and thus had applied for Medical Certificate. Sri.Jagadish, Data Entry Operator (Contract basis) SNR, Government Hospital, Kolar had demanded a bribe of ₹ 15,000/- to put up the file before medical board.

On 25.07.2018. the officials of Anti Corruption Bureau Kolar have trapped and arrested Sri.Jagadish, Data Entry Operator (Contract basis) SNR, Government Hospital, Kolar while accepting the bribe amount of ₹ 12,000/- from the complainant. The bribe amount has been seized. The case is under investigation says official press release.

# ಪ್ರವಾಸ

ಬೆಂಗಳೂರು, ಜುಲೈ 25 (ಕರ್ನಾಟಕ ವಾರ್ತೆ)

ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷ ನಸೀರ್ ಅಹಮದ್ ಅವರು ಜುಲೈ 26 ರಿಂದ 28 ರವರೆಗೆ ಬೀದರ್, ಕಲಬುರಗಿ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡು ಜುಲೈ 29 ರಂದು ಬೆಂಗಳೂರಿಗೆ ಹಿಂತಿರುಗುವರು ಎಂದು ಪ್ರಕಟಣೆ ತಿಳಿಸಿದೆ.